## ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 230/2017 ಸಿ.ಡಬ್ಲ್ಯೂ –3 ಪಿ.ಡಬ್ಲ್ಯೂ -5

| | | |
|---|---|---|
| ಹೆಸರು | ಃ | ಸುರೇಂದ್ರ |
| ತಂದೆಃ ಗಂಡ | ಃ | ಸೈಬಣ್ಣ |
| ವಯಸ್ಸು | ಃ | ೫೪ ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | ಃ | ಬಂಗರಗಾ |

ದಿನಾಂಕಃ೨೫.೦೯.೨೦೨೩

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ ಃ**

ಆರೋಪಿತರ ಪರಿಚಯ ಇರುತ್ತದೆ, ಚಾಸಾ-೧ ನನ್ನ ಅಕ್ಕನ ಮಗಳು, ಚಾಸಾ-೨ ನನ್ನ ಮಾವ, ಚಾಸಾ-೪ ನನ್ನ ಅಕ್ಕ, ಚಾಸಾ-೫ ನನ್ನ ಮಾವ, ಚಾಸಾ-೬ ನನ್ನ ಮಾವನ ಮಗಳು, ಚಾಸಾ-7 ರಿಂದ 12 ರವರ ಪರಿಚಯ ಇರುತ್ತದೆ.

ದಿ. 10.09.2016 ರಂದು ಘಟನೆ ನಡೆದಿರುತ್ತದೆ. ಆರೋಪಿ ರಾಡಿನಿಂದ ಹೊಡೆ ಬಡೆ ಮಾಡಿರುತ್ತಾರೆ. ಪೋಲಿಸರು ಸದರಿ ದಿನದಂದು ಬಂದು ನನ್ನ ಸಮಕ್ಷಮ 10 ಗಂಟೆಗೆ ಪಂಚನಾಮೆ ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿಯು ನಿಪಿ-೨ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಹಿಯನ್ನು ನಿಪಿ-೨(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ನೀಡಲಾಯಿತು)

**ಪಾಟೀ ಸವಾಲು ಸಸಅ ರವರಿಂದಃ**

ಘಟನೆ ನಡೆದ ಸ್ಥಳವನ್ನು ಚಾಸಾ-೧ ರವರು ನನಗೆ ತೊರಿಸಿರುತ್ತಾರೆ ಎಂದರೆ ಸರಿ. ಬೆಳಿಗ್ಗೆ 10 ಗಂಟೆಯಿಂದ 11 ಗಂಟೆವರೆಗೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ. ಪಂಚನಾಮೆಯನ್ನು ನನಗೆ ಓದಿ ಹೇಳಿರುತ್ತಾರೆ ಎಂಧರೆ ಸರಿ. ಮು.ಮಾ-೧ ನ್ನು ನನ್ನ ಸಮಕ್ಷಮ ಪೋಲಿಸರು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ.ಎ.ಡಿ. ವಕೀಲರಿಂದ**

ನಿಪಿ-2 ರಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಓದಿ ಹೇಳಿರುವುದಿಲ್ಲ ಎಂದರೆ ಸರಿ. ಚಾಸಾ-೨ ರವರು ಸಹಿ ಮಾಡಿದ ಕಾರಣ ನಾನು ಒಂದು ಸಹಿ ಮಾಡಿರುತ್ತೇನೆ ಎಂದರೆ ಸರಿ. ನಾನು ಸಹಿ

ಮಾಡುವ ಸಮಯದಲ್ಲಿ ಮು.ಮಾ-೧ ಅಲ್ಲಿ ಇರಲಿಲ್ಲ ಎಂದರೆ ಸರಿ. ಪೋಲಿಸರು ನನ್ನ ಸಹಿಯನ್ನು ಆಳಂದ ಪೋಲಿಸ್ ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ ಎಂದರೆ ಸರಿ.

ದಿ. 10.09.2016 ರಂದು ಘಟನೆ ನಡೆದಿರುತ್ತದೆ, ಆರೋಪಿ ರಾಡಿನಿಂದ ಹೊಡೆ ಬಡೆ ಮಾಡಿರುತ್ತಾರೆ. ಪೋಲಿಸರು ಸದರಿ ದಿನದಂದು ಬಂದು ನನ್ನ ಸಮಕ್ಷಮ 10 ಗಂಟೆಗೆ ಪಂಚನಾಮೆ ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ, ಒಂದು ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿರುತ್ತೇನೆ ಎಂಧರೆ ಸರಿ.

ಮರುವಿಚಾರಣೆ : ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ